ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	802
ಮಾನ್ಯ ಸದಸ್ಯರ ಹೆಸರು	ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀದರರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	17.12.2018
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಬಾಗಲಕೋಟೆ, ವಿಜಯಪುರ, ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಕಳೆದ 03 ವರ್ಷಗಳಿಂದ ಇಲ್ಲಿಯವರೆಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಎಷ್ಟು ಸಮುದಾಯ ಭವನಗಳನ್ನು ನಿರ್ಮಿಸಲು ಅನುದಾನ ಒದಗಿಸಲಾಗಿದೆ. (ಜಿಲ್ಲಾವಾರು ಅನುದಾನಗಳ ವಿವರಗಳನ್ನು ನೀಡುವುದು).	ಬಾಗಲಕೋಟೆ, ವಿಜಯಪುರ, ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಕಳೆದ 03 ವರ್ಷಗಳಿಂದ ಇಲ್ಲಿಯವರೆಗೆ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಸಮುದಾಯ ಭವನಗಳನ್ನು ನಿರ್ಮಿಸಲು ಅನುದಾನ ಬಿಡುಗಡೆ ಮಾಡಿರುವ ವಿವರಗಳು **www.backwardclasses.kar.nic.in**ರಲ್ಲಿ ಲಭ್ಯವಿರುತ್ತದೆ.
ಆ)	ಮಂಜೂರಾದ ಸಮುದಾಯ ಭವನಗಳ ಕಟ್ಟಡ ನಿರ್ಮಾಣ ಕಾರ್ಯ ಯಾವ ಹಂತದಲ್ಲಿದೆ ಹಾಗೂ ಅಪೂರ್ಣಗೊಂಡ ಸಮುದಾಯ ಭವನಗಳಿಗೆ ಬಾಕಿ ಹಣವನ್ನು ಒದಗಿಸಲಾಗಿದೆಯೇ:	ಮಂಜೂರಾದ ಸಮುದಾಯ ಭವನಗಳ ಕಟ್ಟಡಗಳ ನಿರ್ಮಾಣ ಕಾರ್ಯದ ಪ್ರಗತಿ ವಿವರಗಳು **www.backwardclasses.kar.nic.in**ರಲ್ಲಿ ಲಭ್ಯವಿರುತ್ತದೆ. ಮಾರ್ಗಸೂಚಿಗಳಾನುಸಾರ 3 ಕಂತುಗಳಲ್ಲಿ ಅನುದಾನ ಬಿಡುಗಡೆ ಮಾಡುತ್ತಿದ್ದು, ಸಂಘ-ಸಂಸ್ಥೆಗಳು ಸಲ್ಲಿಸುವ ದಾಖಲಾತಿ ಹಾಗೂ ಪ್ರಗತಿಯನ್ನಾಧರಿಸಿ ಲಭ್ಯವಿರುವ ಅನುದಾನ ಹಾಗೂ ರಾಜ್ಯದ ಒಟ್ಟಾರೆ ಬೇಡಿಕೆಯನ್ನಾಧರಿಸಿ ಅನುದಾನ ಬಿಡುಗಡೆ ಮಾಡಲಾಗುತ್ತಿದೆ.
ಇ)	ಇಲ್ಲವಾದಲ್ಲಿ, ಬಾಕಿ ಹಣವನ್ನು ಯಾವ ಕಾಲಮಿತಿಯಲ್ಲಿ ಒದಗಿಸಲಾಗುವುದು?	ಮಾರ್ಗಸೂಚಿಗಳಾನುಸಾರ 3 ಕಂತುಗಳಲ್ಲಿ ಅನುದಾನ ಬಿಡುಗಡೆ ಮಾಡುತ್ತಿದ್ದು, ಸಂಘ-ಸಂಸ್ಥೆಗಳು ಸಲ್ಲಿಸುವ ದಾಖಲಾತಿ ಹಾಗೂ ಕಟ್ಟಡದ ಪ್ರಗತಿಯನ್ನಾಧರಿಸಿ ಲಭ್ಯವಿರುವ ಅನುದಾನ ಹಾಗೂ ರಾಜ್ಯದ ಒಟ್ಟಾರೆ ಬೇಡಿಕೆಯನ್ನಾಧರಿಸಿ ಅನುದಾನ ಬಿಡುಗಡೆ ಮಾಡಲಾಗುತ್ತಿದೆ.

ಸಂ: ಹಿಂವಕ 1267 ಬಿಎಂಎಸ್ 2018

(ಸಿ.ಪುಟ್ಟರಂಗಶೆಟ್ಟಿ)
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.